# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 521(606)

ಮಾನ್ಯ ಸದಸ್ಯರ ಹೆಸರು: ಶ್ರೀ ರಾಮೋಜಿ ಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು: ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

ಉತ್ತರಿಸಬೇಕಾದ ದಿನಾಂಕ: 09.03.2026

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಎಷ್ಟು ಶಿಕ್ಷಕರ ಹುದ್ದೆಗಳು ಖಾಲಿ ಇವೆ: (ವಿವರ ನೀಡುವುದು). | ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳ ವಿವರ ಈ ಕೆಳಕಂಡಂತಿದೆ:-<br><br>ಪ್ರಾಥಮಿಕ: 45179 / ಪ್ರೌಢ: 13045 |
| ಆ) | ಶಿಕ್ಷಕರ ನೇಮಕಾತಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ವಿಳಂಬಕ್ಕೆ ಕಾರಣಗಳೇನು:? (ವಿವರ ನೀಡುವುದು): | 2022ನೇ ಸಾಲಿನ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಗೆ ರಾಜ್ಯದಲ್ಲಿ 15000 ಹುದ್ದೆಗಳಿಗೆ ಅಧಿಸೂಚನೆ ಹೊರಡಿಸಿದ್ದು, ಅಂತಿಮ ಆಯ್ಕೆಪಟ್ಟಿಯಲ್ಲಿ 13352 ಹುದ್ದೆಗಳು ಆಯ್ಕೆಯಾಗಿರುತ್ತವೆ.<br><br>ಸದರಿ 13352 ಹುದ್ದೆಗಳಲ್ಲಿ 2023-24 ಮತ್ತು 2024-25ನೇ ಸಾಲಿನಲ್ಲಿ ನ್ಯಾಯಾಲಯದ ಪ್ರಕರಣಗಳನ್ನು ಹೊರತುಪಡಿಸಿ ನೇಮಕಾತಿ ಅಧಿಸೂಚನೆ/ನಿಯಮಗಳಂತೆ ಎಲ್ಲಾ ಷರತ್ತು ಮಾನದಂಡಗಳನ್ನು ಪೂರೈಸಿರುವ ಒಟ್ಟು 12,419 ಶಿಕ್ಷಕರಿಗೆ ನೇಮಕಾತಿ ಆದೇಶ ನೀಡಲಾಗಿದ್ದು 12,419 ಶಿಕ್ಷಕರು ಶಾಲಾ ಕರ್ತವ್ಯಕ್ಕೆ ಹಾಜರು ಪಡಿಸಿಕೊಳ್ಳಲಾಗಿದೆ.<br><br>ಸರ್ಕಾರದ ಆದೇಶ ಸಂಖ್ಯೆ: ಇಪಿ 230 ಪಿಬಿಎಸ್ 2024 ದಿನಾಂಕ:07.10.2024ರ ಆದೇಶದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದ 07 ಜಿಲ್ಲೆಗಳಲ್ಲಿ ಖಾಲಿಯಿರುವ ಪ್ರಾಥಮಿಕ ಶಾಲೆಗಳ 4882 |
| ಇ) | ಸರ್ಕಾರವು ಪ್ರತಿ ವರ್ಷ ಎಷ್ಟು ಶಿಕ್ಷಕರನ್ನು ನೇಮಕಾತಿ ಮಾಡಿಕೊಳುತ್ತಿದೆ: (ವಿವರ ನೀಡುವುದು) | |
| ಈ) | ಶಿಕ್ಷಕರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? | |

| | | |
|---|---|---|
| | | ಹುದ್ದೆಗಳು ಹಾಗೂ ಪ್ರೌಢ ಶಾಲೆಗಳ 385 ಹುದ್ದೆಗಳನ್ನು ಸೇರಿ ಒಟ್ಟು ಹುದ್ದೆಗಳಲ್ಲಿ 5267 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ.<br><br>ಸರ್ಕಾರಿ ಪ್ರಾಥಮಿಕ/ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಶೈಕ್ಷಣಿಕ ವರ್ಷದ ಅಂತ್ಯದವರೆಗೆ 34027 ಹಾಗೂ 9499 ತಾತ್ಕಾಲಿಕವಾಗಿ ಶಿಕ್ಷಕರುಗಳನ್ನು ನೇಮಕಾತಿ ಮಾಡಿಕೊಳ್ಳುವ ಮೂಲಕ ಶಿಕ್ಷಕರ ಕೊರತೆಯನ್ನು ನೀಗಿಸಲು ಕ್ರಮವಹಿಸಿದೆ. |

**ಇಪಿ 30 ಪಿಎಂಎ 2026**

**(ಎಸ್. ಮಧು ಬಂಗಾರಪ್ಪ)**

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು